ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 29-03-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಪತ್ರಿಕಾಗೋಷ್ಠಿ:<br><br>ಶ್ರೀ ಯು. ಟಿ. ಖಾದರ್,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು | 30-3-2016<br>ಮಧ್ಯಾಹ್ನ<br>1-30 ಗಂಟೆಗೆ | ಕೊಠಡಿ ಸಂಖ್ಯೆ 318<br>ಮೂರನೇ ಮಹಡಿ,<br>ವಿಕಾಸ ಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಒಂದು ಸಾವಿರ ಶುದ್ಧ ಕುಡಿಯುವ ನೀರು ಘಟಕ ಲೋಕಾರ್ಪಣೆ

ಬೆಂಗಳೂರು, ಮಾರ್ಚ್ 29 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ 7,300 ಶುದ್ಧ ನೀರು ಘಟಕಗಳನ್ನು ಆರಂಭಿಸುವ ಗುರಿ ಇದ್ದು ರಾಜ್ಯದ ಎಲ್ಲಾ ಗ್ರಾಮೀಣರಿಗೆ ಶುದ್ಧ ಕುಡಿಯುವ ನೀರು ನೀಡುವ ಸವಾಲಿನ ಮೊದಲ ಹೆಜ್ಜೆಯಾಗಿ 1000 ಶುದ್ಧ ಕುಡಿಯುವ ನೀರು ಘಟಕಗಳನ್ನು ಆರಂಭಿಸಿದ್ದೇವೆ ಎಂದು ರಾಜ್ಯ ಮುಖ್ಯಮಂತ್ರಿ ಶ್ರೀ ಸಿದ್ಧರಾಮಯ್ಯ ತಿಳಿಸಿದರು.

ಅವರು ಇಂದು ಬೆಳಿಗ್ಗೆ ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಕರ್ನಾಟಕ ಮೂಲ ಸೌಕರ್ಯ ಅಭಿವೃದ್ಧ ನಿಯಮಿತ ಸಂಸ್ಥೆಯ ಮೂಲಕ ಕಲುಷಿತ ನೀರಿನ ಬಳಕೆಯಿಂದ ಭಾದಿತ ಗ್ರಾಮಗಳಲ್ಲಿ ಸ್ಥಾಪಿಸಿರುವ 1000 ಶುದ್ಧ ಕುಡಿಯುವ ನೀರಿನ ಘಟಕಗಳ ಲೋಕಾರ್ಪಣೆ ಮಾಡಿ ಮಾತನಾಡುತ್ತಿದ್ದರು.

ಈ ಹಿಂದೆ ನಾವು ಹುಡುಗರಾಗಿದ್ದಾಗ ಕುಡಿಯುವ ನೀರಿಗಾಗಿ ಬಾವಿ, ಕೆರೆಗಳನ್ನು ಆಶ್ರಯಿಸುತ್ತಿದ್ದೇವು. ನಂತರ ಕೊಳವೆ ಬಾವಿಗಳನ್ನು ಆಶ್ರಯಿಸಲಾಗುತ್ತಿದ್ದು ಪ್ರಕೃತಿ ವಿಕೋಪದಿಂದ ಮಳೆ ಕಡಿಮೆಯಾಗಿ ಕೊಳವೆ ಭಾವಿಗಳಲ್ಲಿಯೂ ನೀರಿನ ಕೊರತೆ ಉಂಟಾಗಿ ಗ್ರಾಮೀಣ ಜನರು ಕುಡಿಯುವ ನೀರಿಗೆ ತತ್ವಾರ ಅನುಭವಿಸಬೇಕಾಯಿತು. ಈ ನಿಟ್ಟಿನಲ್ಲಿ ರಾಜ್ಯದಲ್ಲಿ ಸರ್ಕಾರವು ಸುಮಾರು 7000 ಶುದ್ಧ ಕುಡಿಯುವ ನೀರು ಘಟಕಗಳನ್ನು ಆರಂಭಿಸಲು ನಿರ್ಧರಿಸಿತು ಎಂದು ಮುಖ್ಯ ಮಂತ್ರಿಗಳು ಹೇಳಿದರು.

ರಾಜ್ಯದಲ್ಲಿ ಜನರ ಕುಡಿಯುವ ನೀರಿಗೆ 62 ಟಿ.ಎಂ.ಸಿ. ಕುಡಿಯುವ ನೀರಿನ ಅಗತ್ಯತೆ ಇದೆ. ಈ ನಿಟ್ಟಿನಲ್ಲಿ ಜನರಿಗೆ ಶುದ್ಧ ನೀರನ್ನು ಹಂತ ಹಂತವಾಗಿ ಕೊಡಲೇಬೇಕೆಂಬುದು ರಾಜ್ಯ ಸರ್ಕಾರದ ಸಂಕಲ್ಪವಾಗಿದೆ. ಇದಕ್ಕೆ ನಲವತ್ತೈದು ಸಾವಿರ ಕೋಟಿ ರೂಪಾಯಿಗಳು ವೆಚ್ಚದ ಅಗತ್ಯತೆ ಇದೆ. ಇದನ್ನು ಒಮ್ಮೆಲೆ ಮಾಡಲಾಗದು. ಆದ್ದರಿಂದ ವಿವಿಧ ಮೂಲಗಳಿಂದ ಸಂಪನ್ಮೂಲವನ್ನು ಕ್ರೋಢಿಕರಿಸಿ ಹಂತ ಹಂತವಾಗಿ ಶುದ್ಧ ಕುಡಿಯುವ ನೀರು ಘಟಕಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದರು.

ಸಮಾರಂಭದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವರ ಹೆಚ್.ಕೆ. ಪಾಟೀಲ್ ಅವರು ಶುದ್ಧ ಕುಡಿಯುವ ನೀರು ಘಟಕ ಕುರಿತ ಸಾಕ್ಷ್ಯಚಿತ್ರ ಬಿಡುಗಡೆ ಮಾಡಿ ಮಾತನಾಡಿ ಗ್ರಾಮೀಣರ ರೋಗ ರುಜಿನ ನಿವಾರಿಸುವ ಯತ್ನದಲ್ಲಿ ಶುದ್ಧ ಕುಡಿಯುವ ನೀರು ಘಟಕ ತೆರೆಯಲಾಗುತ್ತಿದೆ. ಸುಮಾರು 7000 ಶುದ್ಧ ನೀರು ಘಟಕ ತೆಗೆದು ಒಂದುವರೆ ಕೋಟಿ ಜನರು ಹಂತ ಹಂತವಾಗಿ ಶುದ್ಧ ನೀರು ಕೊಡಲು ಉದ್ದೇಶಿಸಲಾಗಿದೆ ಎಂದು ಹೇಳಿದರು.

ರಾಜ್ಯ ವಿಧಾನ ಪರಿಷತ್ ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಅವರು ವಸ್ತು ಪ್ರದರ್ಶನ ಉದ್ಘಾಟಿಸಿದರು. ಶುದ್ಧ ಕುಡಿಯುವ ನೀರು ಘಟಕ ಕುರಿತ ಅಂತರ್ಜಾಲಕ್ಕೆ ರಾಜ್ಯ ವಿಧಾನ ಸಭಾಧ್ಯಕ್ಷ ಕಾಗೋಡು ತಿಮ್ಮಪ್ಪ ಅವರು ಚಾಲನೆ ನೀಡಿದರು.

ಸಮಾರಂಭದಲ್ಲಿ ಬೆಂಗಳೂರು ಅಭಿವೃದ್ಧಿ ಸಚಿವ ಕೆ.ಜೆ.ಜಾರ್ಜ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ ಮೂಲ ಸೌಕರ್ಯ ಅಭಿವೃದ್ಧಿ, ಹಜ್ ಹಾಗೂ ವಾರ್ತಾ ಖಾತೆ ಸಚಿವ ಆರ್. ರೋಷನ್ ಬೇಗ್, ಪಶುಸಂಗೋಪನಾ ಸಚಿವ ಎ.ಮಂಜು, ವಿಧಾನ ಸಭೆ ಉಪಾಧ್ಯಕ್ಷ ಎನ್. ಹೆಚ್. ಶಿವಶಂಕರರೆಡ್ಡಿ ವಿಧಾನ ಪರಿಷತ್ ಉಪ ಸಭಾಪತಿ ಮರಿತಿಬ್ಬೇಗೌಡ, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಕೆ.ಎಸ್. ಈಶ್ವರಪ್ಪ

ಹಾಗೂ ಹಲವಾರು ಶಾಸಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಸಚಿವಾಲಯದ ಎಲ್ಲ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಬಾಬು/ಕೆಎಂ